# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 362 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 07.07.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ನೀಡಲಾಗುವ ವಿದೇಶಿ ವ್ಯಾಸಂಗ ವೇತನವನ್ನು ಕಳೆದ 4 ವರ್ಷಗಳಿಂದ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣಗಳೇನು: (ವಿವರ ನೀಡುವುದು) | 2020-21 ಮತ್ತು 2021-22ನೇ ಸಾಲಿನಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ಸದರಿ ಕಾರ್ಯಕ್ರಮಕ್ಕೆ ಅನುದಾನವನ್ನು ಒದಗಿಸಿರುವುದಿಲ್ಲ ಮತ್ತು ಕಾರ್ಯಕ್ರಮವನ್ನು ಅನುಷ್ಠಾನ ಮಾಡಿರುವುದಿಲ್ಲ.<br>2022-23 ನೇ ಸಾಲಿನ ಆಯವ್ಯಯ ಸಲಹಾ ಟಿಪ್ಪಣಿ ಸಂ: ಆಇ 01 ವೆಚ್ಚ-3/2022, ದಿನಾಂಕ: 05.04.2022 ರಲ್ಲಿ ಸದರಿ ಕಾರ್ಯಕ್ರಮವನ್ನು ಕೈಬಿಡುವಂತೆ ತಿಳಿಸಲಾಗಿರುತ್ತದೆ. (ಪ್ರತಿ ಲಗತ್ತಿಸಿದೆ) |
| ಆ) | ಇದರಿಂದಾಗಿ ಕಳೆದ 4 ವರ್ಷಗಳಿಂದ ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | 2020-21ನೇ ಸಾಲಿನಿಂದ ಸದರಿ ಕಾರ್ಯಕ್ರಮಕ್ಕೆ ಅನುದಾನ ಒದಗಿಸದ ಕಾರಣ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿರುವುದಿಲ್ಲ. |
| ಇ) | ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ವಿದೇಶಿ ವ್ಯಾಸಂಗ ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ. | ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ವಿದೇಶಿ ವ್ಯಾಸಂಗ ವೇತನ ಮುಂದುವರೆಸುವ ಬಗ್ಗೆ ಪರಿಶೀಲನೆಯಲ್ಲಿದೆ. |

**ಸಂಖ್ಯೆ:ಹಿಂವಕ 309 ಬಿಂಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 01 ವೆಚ್ಚ-3/2022

ಕರ್ನಾಟಕ ಸರ್ಕಾರ ಸಚಿವಾಲಯ

ವಿಧಾನ ಸೌಧ

ಬೆಂಗಳೂರು, ದಿನಾಂಕ: 05/04/2022

## ಆಯವ್ಯಯ ಸಲಹಾ ಟಿಪ್ಪಣಿ

ವಿಷಯ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ 2022-23ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಬಗ್ಗೆ ಮಾಹಿತಿ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಒದಗಿಸಿರುವ ಅನುದಾನದ ಮಾಹಿತಿಯ ವಿವರಗಳನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ ನೀಡಿದೆ:

(ರೂ.ಲಕ್ಷಗಳಲ್ಲಿ)

| ಕ್ರ ಸಂ | 2022-23 ನೇ ಸಾಲಿನ ಆಯವ್ಯಯ ಕಂಡಿಕೆ | ಲೆಕ್ಕ ಶೀರ್ಷಿಕೆ ಹಾಗೂ ವಿವರ | ಆಯವ್ಯಯ ಹಂಚಿಕೆ | ಘೋಷಿತ ಕಾರ್ಯಕ್ರಮಕ್ಕೆ ಹಂಚಿಕೆಯಾದ ಅನುದಾನ | ಷರಾ |
|---|---|---|---|---|---|
| 1 | **ಕಂಡಿಕೆ-88(ಇ)** 165 ಕೋಟಿ ರೂ.ಗಳ ವೆಚ್ಚದಲ್ಲಿ ಬಾಡಿಗೆ ಕಟ್ಟಡಗಳಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ 50 ಕನಕದಾಸ ವಿದ್ಯಾರ್ಥಿನಿಲಯಗಳಿಗೆ ಸುಸಜ್ಜಿತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು. | 4225-03-277-2-06 | 15000.00 | - | ಪ್ರಸಕ್ತ ಸಾಲಿಗೆ ಇಲಾಖೆಗೆ ಒದಗಿಸಿರುವ ಅನುದಾನದಿಂದ ಕಾರ್ಯಕ್ರಮ ಅನುಷ್ಠಾನಗೊಳಿಸುವುದು. |
| 2 | ಕಂಡಿಕೆ-154 ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಇತರ ವರ್ಗದ ಮಕ್ಕಳಲ್ಲಿ ಉನ್ನತ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು, ಮೊಟ್ಟಮೊದಲ ಬಾರಿಗೆ "ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯ" ಎಂಬ ಯೋಜನೆಯಡಿ ರಾಜ್ಯದ ಶೈಕ್ಷಣಿಕ ಕೇಂದ್ರಗಳಾದ ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಕಲಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ತಲಾ 1,000 ಸಾಮರ್ಥ್ಯದ ಬಹುಮಹಡಿಯ ವಿದ್ಯಾರ್ಥಿನಿಲಯ ಸಮುಚ್ಚಯಗಳನ್ನು 250 ಕೋಟಿ ರೂ.ಗಳ ಮೊತ್ತದಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಿಸಲಾಗುವುದು. | 4225-01-277-2-03<br>4225-02-277-2-03<br>4225-03-277-2-06<br>4225-04-190-0-03 | 37000.00<br>27800.00<br>15000.00<br>32000.00 | 6300.00<br>2700.00<br>5400.00<br>3600.00 | ಇದು ಹೊಸ ಯೋಜನೆಯಾಗಿದ್ದು, ಲೋಕೋಪಯೋಗಿ ಇಲಾಖೆ ಕಾಮಗಾರಿಯನ್ನು ನಿರ್ವಹಿಸುವುದು. ಈ ಸಂಬಂಧ ಲೋಕೋಪಯೋಗಿ ಇಲಾಖೆ ರೂ. 70.00 ಕೋಟಿ ಭರಿಸಲಿದ್ದು, ಉಳಿದ ರೂ. 180.00 ಕೋಟಿಗಳನ್ನು ಸಂಬಂಧಪಟ್ಟ ಇಲಾಖೆಗಳು ಈ ಕೆಳಕಂಡಂತೆ ಲೆಕ್ಕಶೀರ್ಷಿಕೆಯಡಿ ತೋರಿಸಿರುವ ಮೊತ್ತವನ್ನು ಆಯವ್ಯಯದಲ್ಲಿ ಒದಗಿಸಿರುವ ಅನುದಾನದಿಂದ Deposit Cost Contribution ಮಾದರಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಒದಗಿಸುವುದು.<br>SC-35%<br>ST-15%<br>OBC-30% |

| ಕ್ರ ಸಂ | 2022-23 ನೇ ಸಾಲಿನ ಆಯವ್ಯಯ ಕಂಡಿಕೆ | ಲೆಕ್ಕಶೀರ್ಷಿಕೆ ಹಾಗೂ ವಿವರ | ಆಯವ್ಯಯ ಹಂಚಿಕೆ | ಘೋಷಿತ ಕಾರ್ಯಕ್ರಮಕ್ಕೆ ಹಂಚಿಕೆಯಾದ ಅನುದಾನ | ಷರಾ |
|---|---|---|---|---|---|
| | | | | | MWD-20% Planning, Design & DPR ಮುಂತಾದವುಗಳನ್ನು ಲೋಕೋಪಯೋಗಿ ಇಲಾಖೆ ತಯಾರಿಸಿ ಆ ನಂತರ ಪ್ರಸ್ತಾವನೆಯನ್ನು ಸಿದ್ಧಪಡಿಸಿ Project Cost ನಿಗದಿ ಪಡಿಸಿಕೊಂಡು, ವಿವಿಧ ಇಲಾಖೆಗಳಿಂದ ಅನುದಾನ ಪಡೆದು Deposit Cost Contribution ಮಾದರಿಯಲ್ಲಿ ಕಾಮಗಾರಿ ನಿರ್ವಹಿಸುವುದು. |
| 3 | ಕಂಡಿಕೆ-155 : ವಿದ್ಯಾರ್ಥಿ ನಿಲಯಗಳಲ್ಲಿ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲು ಮಾಸಿಕ ಭೋಜನ ವೆಚ್ಚವನ್ನು 150 ರೂ.ಗಳಷ್ಟು ಹೆಚ್ಚಿಸಲು 107 ಕೋಟಿ ರೂ. ಹೆಚ್ಚುವರಿ ಅನುದಾನ ಒದಗಿಸಲಾಗುವುದು. | 2225-03-277-2-53 | 3900.00 | 3900.00 | ಭೋಜನಾ ವೆಚ್ಚದ ಹೆಚ್ಚುವರಿಗೆ ತಗಲುವ ವೆಚ್ಚಕ್ಕೆ ಹೆಚ್ಚುವರಿ ಅನುದಾನ ಒದಗಿಸಲಾಗಿದೆ. ಅದರಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವುದು. |
| 4 | ಕಂಡಿಕೆ-156 ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ಬೇಡಿಕೆ ಮತ್ತು ಹಂಚಿಕೆಯನ್ನು ಸರಿದೂಗಿಸುವ ಉದ್ದೇಶದಿಂದ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ವಿದ್ಯಾರ್ಥಿ ನಿಲಯಗಳಲ್ಲಿ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲಾಗುವುದು. | | | ಆಡಳಿತಾತ್ಮಕ ವಿಷಯವಾದ್ದರಿಂದ ಆರ್ಥಿಕ ಪರಿಣಾಮ ಒಳಗೊಂಡಿರುವುದಿಲ್ಲ. | ಈ ಸಂಬಂಧ ಮಾರ್ಗಸೂಚಿಗಳನ್ನು ರೂಪಿಸಿ ಈ ಸಾಲಿನಿಂದಲೇ ಆಯವ್ಯಯ ಘೋಷಣೆಯಂತೆ ತಾಲ್ಲೂಕುವಾರು ಅರ್ಜಿ ಆಹ್ವಾನಿಸಿ ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸುವುದು. |
| 5 | ಕಂಡಿಕೆ-162 2022-23 ನೇ ಸಾಲಿನಲ್ಲಿ ವಿವಿಧ ಅಭಿವೃದ್ಧಿ ನಿಗಮಗಳ ಬಳಿ ಲಭ್ಯವಿರುವ 615 ಕೋಟಿ ರೂ.ಗಳ ಜೊತೆಗೆ ಹೊಸದಾಗಿ ಅನುಮೋದಿಸಿರುವ 500 ಕೋಟಿ ರೂ.ಗಳ ಹೆಚ್ಚುವರಿ ಅನುದಾನವೂ ಸೇರಿ ಒಟ್ಟಾರೆ 1,115 ಕೋಟಿ ರೂ.ಗಳ ಮೊತ್ತದಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು. | | | | ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಹಾಗೂ ನಿಗಮಗಳ ಬಳಿ ಲಭ್ಯವಿರುವ ಅನುದಾನವನ್ನು ಪೂರ್ಣವಾಗಿ ಬಳಕೆ ಮಾಡಿ ಗಂಗಾ ಕಲ್ಯಾಣ ಯೋಜನೆ ಅನುಷ್ಠಾನಗೊಳಿಸುವುದು. |

Scanned with OKEN Scanner

| ಕ್ರ ಸಂ | 2022-23 ನೇ ಸಾಲಿನ ಆಯವ್ಯಯ ಕಂಡಿಕೆ | ಲೆಕ್ಕ ಶೀರ್ಷಿಕೆ ಹಾಗೂ ವಿವರ | ಆಯವ್ಯಯ ಹಂಚಿಕೆ | ಘೋಷಿತ ಕಾರ್ಯಕ್ರಮಕ್ಕೆ ಹಂಚಿಕೆಯಾದ ಅನುದಾನ | ಷರಾ |
|---|---|---|---|---|---|
| 6 | **ಕಂಡಿಕೆ-168 :** ಮಾನವೀಯತೆ, ಸಮಾನತೆಯ ಹರಿಕಾರ, ಶ್ರೀ ನಾರಾಯಣ ಗುರುರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದು ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲಾಗುವುದು | 2225-03-277-2-62 | 15800.00 | 500.00 | ಈ ಸಂಬಂಧ ಯೋಜನಾ ರೂಪುರೇಷೆಗಳನ್ನು ನಿಗದಿಪಡಿಸಿಕೊಂಡು ವಸತಿ ಶಾಲೆಗಳನ್ನು ಆರಂಭಿಸಲು ಕ್ರಮವಹಿಸುವುದು. |
| 7 | **ಕಂಡಿಕೆ-169 :** ಸರ್ಕಾರದ ಅನುದಾನವು ಯಾವುದೇ ಸೋರಿಕೆಯಾಗದೇ ನೇರವಾಗಿ ವಿದ್ಯಾರ್ಥಿಗಳಿಗೆ ತಲುಪಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ವಿದ್ಯಾರ್ಥಿನಿಲಯಗಳ ಪ್ರವೇಶಾತಿ/ ಕಾರ್ಯಾಚರಣೆ, ಆಡಳಿತ, ನಿರ್ವಹಣೆ ಮತ್ತು ವೆಚ್ಚಗಳನ್ನು ಸಂಪೂರ್ಣವಾಗಿ ಗಣಕೀಕೃತ ಆಡಳಿತ ವ್ಯವಸ್ಥೆಯ ಮೂಲಕ ನಿರ್ವಹಿಸಲಾಗುವುದು. | 2225-03-001-0-01 | 500.00 | 500.00 | ಈ ಸಂಬಂದ ಸೂಕ್ತ ಮಾರ್ಗಸೂಚಿಗಳನ್ನು ಸಿದ್ಧಪಡಿಸಿ ವಿದ್ಯಾರ್ಥಿನಿಲಯಗಳ ಪ್ರವೇಶಾತಿ/ ಕಾರ್ಯಾಚರಣೆ, ಇತ್ಯಾದಿ ವ್ಯವಸ್ಥೆಯ ಗಣಕೀಕರಣಕ್ಕೆ ಕ್ರಮವಹಿಸುವುದು. |
| 8 | **ಕಂಡಿಕೆ-170 :** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿಗಾಗಿ ಸ್ಥಾಪಿಸಲಾಗಿರುವ ನಿಗಮಗಳ ಮೂಲಕ 400 ಕೋಟಿ ರೂ.ಗಳ ಮೊತ್ತದಲ್ಲಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗುವುದು. ದೇವರಾಜ ಅರಸು ಅಭಿವೃದ್ಧಿ ನಿಗಮದ ಮೂಲಕ ಹಿಂದುಳಿದ ಹಾಗೂ ಅತೀ ಹಿಂದುಳಿದ ಸಮುದಾಯಗಳಾದ ತಿಗಳ, ಮಾಳಿ, ಮಾಳಿ ಮಾಲಗಾರ, ಕುಂಬಾರ, ಯಾದವ, ದೇವಾಡಿಗ, ಸಿಂಪಿ, ಕ್ಷತ್ರಿಯ, ಮೇದಾರ, ಕುಂಚಿ, ಕುರ್ಮ, ಪಿಂಜಾರ/ನದಾಫ್, ಕುರುಬ, ಬಲಿಜ, ಈಡಿಗ ಹಡಪದ ಹಾಗೂ ಇತರೆ ಜನಾಂಗದ ಅಭಿವೃದ್ಧಿಗೆ 400 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು. | | | | ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿನ ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮವು ಸೇರಿದಂತೆ ಎಲ್ಲಾ ನಿಗಮಗಳಲ್ಲಿ ಖಾಲಿ ಲಭ್ಯವಿರುವ ಅನುದಾನ ಹಾಗೂ ಪ್ರಸಕ್ತ ಸಾಲಿಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಿಂದ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಕ್ರಮವಹಿಸುವುದು. |
| 9 | ಕಂಡಿಕೆ-171 : ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ಹಾಗೂ ಒಕ್ಕಲಿಗರ ಅಭಿವೃದ್ಧಿ ನಿಗಮವನ್ನು ಈಗಾಗಲೇ ಘೋಷಿಸಿದ್ದು, ಪ್ರಸಕ್ತ ಸಾಲಿನಲ್ಲಿ ತಲಾ 100 ಕೋಟಿ ರೂ.ಗಳ ಮೊತ್ತದಲ್ಲಿ ಕಾರ್ಯಕ್ರಮ ರೂಪಿಸಲಾಗುವುದು. | | | | ವೀರಶೈವ_ಲಿಂಗಾಯತ ಅಭಿವೃದ್ಧಿ ನಿಗಮ ಹಾಗೂ ಒಕ್ಕಲಿಗರ ಅಭಿವೃದ್ಧಿ ನಿಗಮದ ಬ್ಯಾಂಕ್ ಖಾತೆಯಲ್ಲಿ ಈಗಾಗಲೇ ಕ್ರಮವಾಗಿ ರೂ 100.00 ಕೋಟಿ ಹಾಗೂ ರೂ 50.00 ಕೋಟಿ ಲಭ್ಯವಿದೆ. ಸದರಿ ಅನುದಾನದಲ್ಲಿ ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸುವುದು. |

| ಕ್ರ ಸಂ | 2022-23 ನೇ ಸಾಲಿನ ಆಯವ್ಯಯ ಕಂಡಿಕ | ಲೆಕ್ಕ ಶೀರ್ಷಿಕೆ ಹಾಗೂ ವಿವರ | ಆಯವ್ಯಯ ಹಂಚಿಕೆ | ಘೋಷಿತ ಕಾರ್ಯಕ್ರಮಕ್ಕೆ ಹಂಚಿಕೆಯಾದ ಅನುದಾನ | ಷರಾ |
|---|---|---|---|---|---|
| 10 | ಕಂಡಿಕೆ-172 : ಮರಾಠ ಅಭಿವೃದ್ಧಿ ನಿಗಮದ ಮೂಲಕ 50 ಕೋಟಿ ರೂ.ಗಳ ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು. | | | | ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಈ ನಿಗಮಕ್ಕೆ ಪ್ರಸಕ್ತ ಸಾಲಿಗೆ ರೂ 10.00 ಕೋಟಿ ಅನುದಾನ ಒದಗಿಸಲಾಗಿದೆ. ಈ ಅನುದಾದಲ್ಲಿ ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸುವುದು. |
| 11 | ಕಂಡಿಕೆ-173 : ಕೊಡವ ಜನಾಂಗದ ಶ್ರೇಯೋಭಿವೃದ್ಧಿಗಾಗಿ 10 ಕೋಟಿ ರೂ. ಮೊತ್ತದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳಲಾಗುವುದು. | 2225-03-190-0-04 | 10000.00 | - | ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮಕ್ಕೆ ಆಯವ್ಯಯದಲ್ಲಿ ಒದಗಿಸಿರುವ ಒಟ್ಟಾರೆ ಅನುದಾನದಲ್ಲಿಯೇ ಕೊಡವ ಜನಾಂಗದ ಶ್ರೇಯೋಭಿವೃದ್ಧಿಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸುವುದು. |
| 12 | ಕಂಡಿಕೆ-174 : ಶಿವಶರಣೆ ನೀಲೂರು ನಿಂಬೆಕ್ಕರವರ ಜನ್ಮಸ್ಥಳವನ್ನು ಅಭಿವೃದ್ಧಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾವುದು. | **ಪ್ರವಾಸೋದ್ಯಮ ಇಲಾಖೆಗೆ ವರ್ಗಾಯಿಸಲು ಸಹಮತಿ ನೀಡಿದೆ.** | | | |
| 13 | ಕಂಡಿಕೆ-175 : ಶ್ರೀ ಮಡಿವಾಳ ಮಾಚಿದೇವ ಮೂಲಸ್ಥಾನ ದೇವರಹಿಪ್ಪರಗಿಯಲ್ಲಿ ಮಾಚಿದೇವರ ಎಲ್ಲಾ ಕುರುಹುಗಳನ್ನು ಅಭಿವೃದ್ಧಿಗೊಳಿಸಿ ಸಾರ್ವಜನಿಕ ಯಾತ್ರಾ ಸ್ಥಳಗಳನ್ನಾಗಿ ಮಾಡಲಾಗುವುದು. | ಪ್ರವಾಸೋದ್ಯಮ ಇಲಾಖೆಗೆ ವರ್ಗಾಯಿಸಲು ಸಹಮತಿ ನೀಡಿದೆ. | | | |
| 14 | ಕಂಡಿಕೆ-176 : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸ್ಪೋಕನ್ ಇಂಗ್ಲೀಷ್ ಹಾಗೂ ವ್ಯಕ್ತಿತ್ವ ವಿಕಸನದ ತರಬೇತಿಗಳನ್ನು ಐದು ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾರಂಭಿಸಲಾಗುವುದು. | 2225-03-277-2-37 | 3000.00 | 500.00 | ಆಯವ್ಯಯ ಘೋಷಣೆಯಂತೆ ಸೂಕ್ತ ಮಾರ್ಗಸೂಚಿಗಳನ್ನು ರೂಪಿಸಿ ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವುದು. |
| 15 | ಕಂಡಿಕೆ-177 : ಹಿಂದುಳಿದ ವರ್ಗಗಳ ಸುಮಾರು 25.000 ಯುವ ಜನರಿಗೆ ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTC, KGTTI ರಲ್ಲಿ ಅಲ್ಪಾವಧಿ ಕೋರ್ಸ್‌ಗಳ ಮೂಲಕ ಕೌಶಲ್ಯ ತರಬೇತಿ ನೀಡಲು ಅಮೃತ ಮುನ್ನಡೆ ಎಂಬ ಹೊಸ ಯೋಜನೆಯನ್ನು ಆರಂಭಿಸಲಾಗುವುದು. | | | | ಆಯವ್ಯಯ ಘೋಷಣೆಯಂತೆ ಸೂಕ್ತ ಮಾರ್ಗಸೂಚಿಗಳನ್ನು ರೂಪಿಸಿ ತರಬೇತಿ ಕಾರ್ಯಕ್ರಮವನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಅನುಷ್ಠಾನಗೊಳಿಸುವುದು. |

4

Scanned with OKEN Scanner

| ಕ್ರ ಸಂ | 2022-23 ನೇ ಸಾಲಿನ ಆಯವ್ಯಯ ಕಂಡಿಕೆ | ಲೆಕ್ಕಶೀರ್ಷಿಕೆ ಹಾಗೂ ವಿವರ | ಆಯವ್ಯಯ ಹಂಚಿಕೆ | ಘೋಷಿತ ಕಾರ್ಯಕ್ರಮಕ್ಕೆ ಹಂಚಿಕೆಯಾದ ಅನುದಾನ | ಷರಾ |
|---|---|---|---|---|---|
| 16 | ಕಂಡಿಕೆ-178 : ಸಮಾಜ ಕಲ್ಯಾಣ, ಪರಿಶಿಷ್ಟ ಪಂಗಡ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ 50,000 ವಿದ್ಯಾರ್ಥಿಗಳಿಗೆ ಸರ್ಕಾರಿ ಉದ್ಯೋಗಕ್ಕೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ನೀಡಲಾಗುವುದು. | 2225-03-277-2-37 | 3000.00 | 500.00 | ಆಯವ್ಯಯ ಘೋಷಣೆಯಂತೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತರಬೇತಿ ನೀಡಲು ಕ್ರಮವಹಿಸುವುದು. |

ಸೂಚನೆ :-

1. ಲೆ.ಶೀ.2225-03-190-0-06 ಕ್ರಾಂತಿವೀರ ಸಂಗೊಳ್ಳಿರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಒದಗಿಸಿರುವ ಅನುದಾನವನ್ನು ಈಗಾಗಲೇ ಅನುಮೋದನೆಯಾಗಿರುವ ಕಾಮಗಾರಿಗಳಿಗೆ ಮಾತ್ರ ಉಪಯೋಗಿಸುವುದು. ಹೊಸದಾಗಿ ಕ್ರಿಯಾ ಯೋಜನೆ ಮಾಡುವಂತಿಲ್ಲ ಹಾಗೂ ಯಾವುದೇ ಹೊಸ ಕಾಮಗಾರಿಗಳನ್ನು ತೆಗೆದುಕೊಳ್ಳುವಂತಿಲ್ಲ.
2. ಲೆ.ಶೀ. 2225-03-190-0-05 ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಒದಗಿಸಿರುವ ಅನುದಾನದಲ್ಲಿ ರೂ 100.00 ಕೋಟಿ ಮೊತ್ತವನ್ನು ಮಾನ್ಯ ಮುಖ್ಯಮಂತ್ರಿಯವರ ವಿಶೇಷ ವಿವೇಚನೆಗೆ ಒಳಪಡಿಸಿದ್ದು, ಈ ಅನುದಾನವನ್ನು ಮಾನ್ಯ ಮುಖ್ಯಮಂತ್ರಿಯವರ ಅನುಮೋದನೆ ಪಡೆದೇ ಅನುದಾನ ಬಿಡುಗಡೆ ಮಾಡತಕ್ಕದ್ದು. ಮುಂದುವರೆದು, ಇದೇ ಲೆಕ್ಕಶೀರ್ಷಿಕೆಯಡಿ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮಕ್ಕೆ ರೂ 6.00 ಕೋಟಿ, ಕಾಡುಗೊಲ್ಲ ಅಭಿವೃದ್ಧಿ ನಿಗಮಕ್ಕೆ ರೂ 3.00 ಕೋಟಿ, ಸವಿತಾ ಸಮಾಜ ಅಭಿವೃದ್ಧಿ ನಿಗಮಕ್ಕೆ ರೂ 5.00 ಕೋಟಿ, ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ರೂ 6.00 ಕೋಟಿ ಹಾಗೂ ಮರಾಠ ಅಭಿವೃದ್ಧಿ ನಿಗಮಕ್ಕೆ ರೂ 10.00 ಕೋಟಿ ಒಟ್ಟಾರೆ ರೂ 30.00 ಕೋಟಿ ಅನುದಾನವನ್ನು ಹಂಚಿಕೆ ಮಾಡಿ ಬಿಡುಗಡೆ ಮಾಡುವಂತೆ ಹಾಗೂ ಉಳಿದ ರೂ 20.00 ಕೋಟಿಗಳನ್ನು ಮುಂದುವರೆದ ಯೋಜನೆಗೆ ಬಳಸಿಕೊಳ್ಳುವಂತೆ ಸೂಚಿಸಿದೆ.
3. ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮದಡಿ ಅರಿವು ಕಾರ್ಯಕ್ರಮ, ವೇತನ ಮತ್ತು ಕಛೇರಿ ವೆಚ್ಚಗಳಿಗೆ ಮಾತ್ರ ಅನುದಾನ ಒದಗಿಸಲಾಗಿರುತ್ತದೆ. ಉಳಿದಂತೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ, ನಿವೇಶನ ಹಂಚಿಕೆ, ಮೂಲಭೂತ ಸೌಕರ್ಯ ಕಾರ್ಯಕ್ರಮಗಳನ್ನು ಕೈಬಿಡುವುದು ಮತ್ತು ಆಶ್ರಮ ಶಾಲೆಗಳ ನಿರ್ವಹಣೆಯನ್ನು ಕ್ರೈಸ್ ಗೆ ವಹಿಸುವುದು.
4. ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ರೂ 15.00 ಕೋಟಿಗಳನ್ನು ಲೆ.ಶೀ.2225-03-277-2-83 ರಡಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ರೂ 15.00 ಕೋಟಿಗಳನ್ನು ಲೆ.ಶೀ. 2225-03-277-2-51 ಗಳನ್ನು ಒದಗಿಸಲಾಗಿದೆ.
5. ಲೆ.ಶೀ. 2225-03-277-2-37 ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮದಡಿ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ ಕಾರ್ಯಕ್ರಮ, ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ ಮತ್ತು ಪಿ.ಹೆಚ್.ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಫೆಲೋಶಿಪ್ ಕಾರ್ಯಕ್ರಮಗಳನ್ನು ಕೈಬಿಡುವುದು. ಮುಂದುವರೆದು, ಹಿಂದುಳಿದ ವರ್ಗಗಳ

Scanned with OKEN Scanner

ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿ ಕಾರ್ಯಕ್ರಮ, ಸೇನೆಗಳಿಗೆ ಆಯ್ಕೆಯಾಗುವ ಅವಕಾಶಗಳನ್ನು ಹೆಚ್ಚಿಸಲು ಅಭ್ಯರ್ಥಿಗಳಿಗೆ ಆಯ್ಕೆ ಪೂರ್ವ ತರಬೇತಿ, IIT/IIM/IISc ಮುಂತಾದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಕಾರ್ಯಕ್ರಮಗಳನ್ನು ಒಟ್ಟುಗೂಡಿಸಿ ಒಂದು ಕಾರ್ಯಕ್ರಮ ರೂಪಿಸುವುದು.

6. ಅಲೆಮಾರಿ ಜನಾಂಗದವರಿಗೆ ಸಮುದಾಯ ಭವನ ನಿರ್ಮಾಣ (ಲೆ.ಶೀ. 4225-03-800-0-05) ರಡಿ ಈಗಾಗಲೇ ರೂ 8.00 ಕೋಟಿ ಕೆ.ಹೆಚ್.ಬಿ ಸಂಸ್ಥೆಗೆ ಒದಗಿಸಲಾಗಿದ್ದು, ಕೈಗೊಳ್ಳಲಾದ ಕಾಮಗಾರಿಗಳ ವಿವರಗಳನ್ನು ಪರಿಶೀಲಿಸಿ, ಸದರಿ ಮೊತ್ತದಲ್ಲಿಯೇ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮವಹಿಸುವುದು.

7. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯ ಎಲ್ಲಾ ನಿಗಮಗಳಿಗೆ ಷೇರು ಬಂಡವಾಳ ಒದಗಿಸುವ ಸಲುವಾಗಿ ಹೊಸದಾಗಿ ಲೆಕ್ಕಶೀರ್ಷಿಕೆ "4225-03-190-0-11 ವಿವಿಧ ನಿಗಮಗಳಿಗೆ ಷೇರು ಬಂಡವಾಳ-211-ಬಂಡವಾಳ ಹೂಡಿಕೆ" ನೀಡಲಾಗಿದ್ದು, ರೂ.1000.00 ಲಕ್ಷಗಳನ್ನು ಒದಗಿಸಲಾಗಿದೆ.

8. ಯಾವುದೇ ಲೆಕ್ಕಶೀರ್ಷಿಕೆಗೆ ಸಂಬಂಧಿಸಿದಂತೆ ಬ್ಯಾಂಕ್ ಖಾತೆಯಲ್ಲಿ ಉಳಿದಿರುವ ಮೊತ್ತವನ್ನು ಸಂಪೂರ್ಣವಾಗಿ ವೆಚ್ಚ ಮಾಡಿದ ನಂತರವೇ ಪ್ರಥಮ ತ್ರೈಮಾಸಿಕ ಕಂತಿನ ಬಿಡುಗಡೆಗೆ ಕ್ರಮವಹಿಸುವುದು.

9. ಇಲಾಖೆಯ ವ್ಯಾಪ್ತಿಯ ಎಲ್ಲಾ ನಿಗಮ / ಮಂಡಳಿಗಳು ಬ್ಯಾಂಕ್ ಖಾತೆಗಳನ್ನು NTT ಮಾಡ್ಯೂಲ್‌ನಲ್ಲಿ ಲಿಂಕ್ ಮಾಡಲು ಕೂಡಲೇ ಕ್ರಮವಹಿಸುವುದು. ಅನುದಾನದ ಕಂತುಗಳನ್ನು ಬಿಡುಗಡೆ ಮಾಡುವ ಮುನ್ನ ಆಡಳಿತ ಇಲಾಖೆಯು NTT ಮಾಡ್ಯೂಲ್‌ನಲ್ಲಿ ಬ್ಯಾಂಕ್ ಖಾತೆಗಳನ್ನು ಲಿಂಕ್ ಮಾಡಿರುವುದನ್ನು ಖಚಿತಪಡಿಸಿಕೊಳ್ಳುವುದು.

10. ಕೈಸ್ ಗೆ ಸಂಬಂಧಪಟ್ಟಂತೆ ಇದರೊಂದಿಗೆ ಲಗತ್ತಿಸಿರುವ ನೋಟ್‌ನಲ್ಲಿನ ಸೂಚನೆಗಳನ್ನು ಪಾಲಿಸುವುದು.

(ಸರ್ಕಾರದ ಕಾರ್ಯದರ್ಶಿ (ಆ & ಸಂ),
ಆರ್ಥಿಕ ಇಲಾಖೆ ಇವರಿಂದ ಅನುಮೋದಿತ)

(ಎಸ್.ಗೋಪಿಚಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ವೆಚ್ಚ-3&9)

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

Scanned with OKEN Scanner